# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅನುಸೂಚಿತ ಜಾತಿ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಪರಿಶಿಷ್ಟ ಜಾತಿ ಮೊತ್ತದಡಿ ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿ ಪಡಿಸಲು ಗ್ರಾಮಗಳಿಗೆ ಅನುಮೋದನೆ ಮತ್ತು ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ: 145: ಎಎಫ್‌ಎನ್: 2017 ದಿ:01.04.2017.
2. 2017-18ನೇ ಸಾಲಿನ ಕಾರ್ಯಕ್ರಮವಾರು ಆಯವ್ಯಯ ಹಂಚಿಕೆಯ ಸಾರಾಂಶ (ದಿನಾಂಕ:01.04.2017 ರಂದು ಅನುಮೋದನೆಗೊಂಡಂತೆ).

* * *

**ಪ್ರಸ್ತಾವನೆ:**

ಅನುಸೂಚಿತ ಜಾತಿ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಪರಿಶಿಷ್ಟ ಜಾತಿ ಯೋಜನೆಯಡಿ ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿ ಪಡಿಸಲು ಓದಲಾದ (1) ರಲ್ಲಿ ರೂ.6.80 ಕೋಟಿಗಳನ್ನು ಪರಿಶಿಷ್ಟ ಜಾತಿಗೆ ಅನುದಾನವನ್ನು ಅಭಿವೃದ್ಧಿಗೆ ಅನುದಾನವನ್ನು ಒದಗಿಸಿ, ಈ ಕೆಳಕಂಡಂತೆ ಹಂಚಿಕೆ ಮಾಡಲಾಗಿದೆ..

1. 4215-02-800-0-07-422 (ಯೋಜನೆ) ವಿಶೇಷ ಘಟಕ ಯೋಜನೆ – ರೂ. 6.80 ಕೋಟಿಗಳು

**ಒಟ್ಟು – ರೂ. 6.80 ಕೋಟಿಗಳು**

ಅದರಂತೆ, ಅನುಸೂಚಿತ ಜಾತಿ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಪರಿಶಿಷ್ಟ ಜಾತಿ ಯೋಜನೆಯಡಿ ಅನುಬಂಧ-1 ರಲ್ಲಿರುವಂತೆ ಗ್ರಾಮಗಳನ್ನು ಆಯ್ಕೆ ಮಾಡಿ ಅನುಮೊದನೆ ನೀಡಿ ಮತ್ತು ಅಭಿವೃದ್ಧಿ ಪಡಿಸಲು ಅನುದಾನವನ್ನು ಬಿಡುಗಡೆ ಮಾಡಲು ಅವಶ್ಯವಿದೆ. ಪ್ರಯುಕ್ತ ಈ ಆದೇಶ.

## ಸರ್ಕಾರಿ ಆದೇಶ ಸಂಖ್ಯೆ ಗ್ರಾಅಪ:33:ಗ್ರಾವಿಯೋ:2017, ಬೆಂಗಳೂರು, ದಿನಾಂಕ:30.10.2017.

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, **ಅನುಸೂಚಿತ ಜಾತಿ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಪರಿಶಿಷ್ಟ ಜಾತಿ ಯೋಜನೆಯಡಿ ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿ ಪಡಿಸಲು ಪರಿಶಿಷ್ಟ ಜಾತಿ ಯೋಜನೆಗೆ ರೂ.680.00ಲಕ್ಷಗಳನ್ನು** (ಆರು ನೂರ ಎಂಭತ್ತು ಲಕ್ಷಗಳು ಮಾತ್ರ) ಅನುದಾನವನ್ನು ಪರಿಶಿಷ್ಟ ಜಾತಿ ಅನುಬಂಧ-1ರಲ್ಲಿ ನಿಗಧಿಪಡಿಸಿರುವಂತೆ ಜನಾಂಗದವರ ಅಭಿವೃದ್ಧಿಗಾಗಿ ಗ್ರಾಮಗಳ ಆಯ್ಕೆಗೆ ಅನುಮೋದನೆ ನೀಡಿ ಅವುಗಳನ್ನು ಅಭಿವೃದ್ಧಿಪಡಿಸಲು ಗ್ರಾಮವಾರು ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಅನುಮೋದನೆ ನೀಡಲಾಗಿದೆ.

**ಷರತ್ತುಗಳು :**

1. ಅನುಬಂಧದಲ್ಲಿ ವಿವರಿಸಿರುವಂತೆ ಗ್ರಾಮಗಳಿಗೆ ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು.

2. ಗ್ರಾಮ ಪಂಚಾಯಿತಿಗಳು ವಾರ್ಡ್ ಸಭೆ / ಗ್ರಾಮ ಸಭೆಗಳನ್ನು ನಡೆಸಿ ಗ್ರಾಮಾಭಿವೃದ್ಧಿ ಯೋಜನೆಯನ್ನು ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯ ಮಾರ್ಗಸೂಚಿಯಲ್ಲಿರುವಂತೆ ತಯಾರಿಸಿ ಗ್ರಾಮ ಪಂಚಾಯಿತಿಯ ಅನುಮೋದನೆಯನ್ನು ಪಡೆಯುವುದು. ಗ್ರಾಮ ಪಂಚಾಯಿತಿಯು ಕ್ರಿಯಾ ಯೋಜನೆಯನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದೆ ಅನುಮೋದನೆ ನೀಡುವುದು. ಅನುಮೋದನೆಯಾದ ಗ್ರಾಮಾಭಿವೃದ್ಧಿ ಯೋಜನೆಯನ್ನು ತಾಲ್ಲೂಕು, ಜಿಲ್ಲಾ ಪಂಚಾಯಿತಿ ಹಾಗೂ ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸುವುದು.

3. ಗ್ರಾಮ ಪಂಚಾಯತಿಗಳು ಅನುಬಂಧ-1ರಲ್ಲಿ ಅನುಮೋದನೆ ನೀಡಿದ ಗ್ರಾಮಗಳನ್ನು ಎಸ್‌ಸಿಪಿ ಯೋಜನೆಯಡಿ ಪರಿಶಿಷ್ಟ ಜಾತಿಯ ಕಾಲೋನಿಗಳ ಅಭಿವೃದ್ಧಿಗೆ ಮಾತ್ರ ಕೈಗೊಳ್ಳುವ ಕ್ರಿಯಾ / ಗ್ರಾಮಾಭಿವೃದ್ಧಿ ಯೋಜನೆಯನ್ನು ಕಡ್ಡಾಯವಾಗಿ ತಯಾರಿಸುವುದು.

4. ಗ್ರಾಮ ಪಂಚಾಯತಿಗಳು ಗ್ರಾಮಾಭಿವೃದ್ಧಿ ಯೋಜನೆಯನ್ನು ತಯಾರಿಸುವಾಗ ಮುಖ್ಯ ಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಮಾರ್ಗಸೂಚಿಯಲ್ಲಿ ಸೂಚಿಸಿರುವ ಪರಿಮಾಣಗಳಂತೆ ಅಳವಡಿಸುವುದು ಹಾಗೂ ಕಾರ್ಯಕ್ರಮವಾರು ಭರಿಸುವ ಅನುದಾನವನ್ನು ಸಹ ಪ್ರತ್ಯೇಕವಾಗಿ ನಮೂದಿಸುವುದು.

5. ಶಾಸಕರ ಅಧ್ಯಕ್ಷತೆಯಲ್ಲಿ ರಚನೆಯಾದ ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯ ಉಸ್ತುವಾರಿ ಸಭೆಯನ್ನು ಕಡ್ಡಾಯವಾಗಿ 2 ತಿಂಗಳಿಗೊಮ್ಮೆ ನಡೆಯುವಂತೆ ಕ್ರಮ ಕೈಗೊಳ್ಳುವುದು. ಇದೇ ಸಭೆಯಲ್ಲಿ ಈ ಆದೇಶದಲ್ಲಿ ಅನುಮೋದನೆ ನೀಡಿ ಬಿಡುಗಡೆ ಮಾಡಿರುವ ಎಸ್.ಸಿ.ಪಿ. ಅನುದಾನವನ್ನು ಮತ್ತು ಪ್ರಗತಿಯನ್ನು ಪರಾಮರ್ಶಿಸಿ ಗ್ರಾಮದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ಪಡೆದು/ ನೀಡಿ ವಿವಿಧ ಯೋಜನೆಗಳಲ್ಲಿ ಲಭ್ಯವಾಗುವ ಅನುದಾನವನ್ನು ಒಗ್ಗೂಡಿಸಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿ ಆಯ್ಕೆಯಾದ ಗ್ರಾಮವನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವುದು.

6. ಎಸ್.ಸಿ.ಪಿ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕ ವಹಿಗಳಲ್ಲಿ (Separate Register) ನಿರ್ವಹಿಸುವುದು ಹಾಗೂ ಆಯಾ ಕಾರ್ಯಕ್ರಮಗಳ ಅನುದಾನವನ್ನು ಬಳಸುವಾಗ ಆಯಾ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರವು ಹೊರಡಿಸಿದ ಆದೇಶ/ ಮಾರ್ಗಸೂಚಿ/ ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಡಾ.ಬೋವನಹಳ್ಳಿನಾಗರಾಜ್)**
ನಿರ್ದೇಶಕರು (ಸುಗ್ರಾಯೋ, ರಸ್ತೆ & ಸೇತುವೆ)
ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು, (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು, (ಆಡಿಟ್ – 1 & 2) ಕರ್ನಾಟಕ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ.& ಪಂ.ರಾಜ್ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ. ರಾಜ್) ಗ್ರಾ.ಅ.& ಪಂ.ರಾಜ್ ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಮಂಡ್ಯ, ಮೈಸೂರು, ದಾವಣಗೆರೆ, ಕಲಬುರಗಿ, ಚಿಕ್ಕಮಗಳೂರು.
9. ಉಪ ಕಾರ್ಯದರ್ಶಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಮಂಡ್ಯ, ಮೈಸೂರು, ದಾವಣಗೆರೆ, ಕಲಬುರಗಿ, ಚಿಕ್ಕಮಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ
10. ಜಿಲ್ಲಾ ಖಜಾನಾಧಿಕಾರಿಗಳು ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಮಂಡ್ಯ, ಮೈಸೂರು, ದಾವಣಗೆರೆ, ಕಲಬುರಗಿ, ಚಿಕ್ಕಮಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ
11. ಮುಖ್ಯ ಅಭಿಯಂತರರು, ಪಿಆರ್ಇಡಿ / ವ್ಯವಸ್ಥಾಪಕ ನಿರ್ದೇಶಕರು, ಕೆಆರ್ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.
12. ಸರ್ಕಾರದ ಉಪಕಾರ್ಯದರ್ಶಿ (ಆಡಳಿತ) ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ, ಕಂಪ್ಯೂಟರ್ ಸೆಲ್, ಈ ಆದೇಶವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
13. ರಕ್ಷ ಕಡತಕ್ಕೆ/ಹೆಚ್ಚುವರಿ ಪ್ರತಿ.

# ಅನುಬಂಧ-1

| ಕ್ರ.ಸಂ | ತಾಲ್ಲೂಕಿನ ಹೆಸರು | ಹಳ್ಳಿಗಳು | ಹಂಚಿಕೆ ಮಾಡಿ ಬಿಡುಗಡೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಮಾಯಕೊಂಡ | ದೊಡ್ಡರಂಗವ್ವನಹಳ್ಳಿ | 100.00 |
| 2<br>3 | ಟಿ.ನರಸೀಪುರ | ಸೊಸಲೆ<br>ಕೊಳತ್ತೂರು | 200.00 |
| 4 | ಚಿಂಚೊಳ್ಳಿ | ಧರ್ಮಸಾಗರ | 100.00 |
| 5 | ಮಳವಳ್ಳಿ | ಚಿಲಕವಾಡಿ | 100.00 |
| 6 | ಮೂಡಿಗೆರೆ | ಮಾಕನಹಳ್ಳಿ | 80.00 |
| 7 | ಹೊಳಲ್ಕೆರೆ | ಮದ್ದೇರು | 100.00 |
| ಒಟ್ಟು | | | 680.00 |

(ಡಾ.ಬೂವನಹಳ್ಳಿನಾಗರಾಜ್)
ನಿರ್ದೇಶಕರು (ಸುಗ್ರಾಯೋ, ರಸ್ತೆ & ಸೇತುವೆ)
ಹಾಗೂ ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ